## ಕರ್ನಾಟಕ ಸರ್ಕಾರ

ಸಂಖ್ಯೆ: ಮಮಇ 152 ಮಭಾಬ 2025

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಡಾ|| ಬಿ.ಆರ್. ಅಂಬೇಡ್ಕರ್ ವೀಧಿ
ಬೆಂಗಳೂರು, ದಿನಾಂಕ: 26.11.2025.

## ಅಧಿಸೂಚನೆ

ಮಹಿಳೆಯರು ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟಲು, ಬಾಲ್ಯವಿವಾಹಗಳನ್ನು ತಡೆಯಲು ಹಾಗೂ ಸಮಗ್ರ ಮಕ್ಕಳ ರಕ್ಷಣೆಗಾಗಿ ಪ್ರತಿ ಗ್ರಾಮಪಂಚಾಯತಿಯಲ್ಲಿ ರಚಿಸಲಾಗಿರುವ ಮಹಿಳೆಯರ ಮತ್ತು ಮಕ್ಕಳ ರಕ್ಷಣಾ ಕಾವಲು ಸಮಿತಿಯ ರೀತಿಯಲ್ಲಿ ನಗರ ಮತ್ತು ಪಟ್ಟಣಗಳ ಸ್ಥಳೀಯ ಸಂಸ್ಥೆಗಳಲ್ಲೂ ಕೂಡ ಮಹಿಳೆಯರ ಮತ್ತು ಮಕ್ಕಳ ರಕ್ಷಣಾ ಕಾವಲು ಸಮಿತಿಯನ್ನು ಈ ಕೆಳಕಂಡ ಸದಸ್ಯರನ್ನೊಳಗೊಂಡ **ಅನುಬಂಧದಲ್ಲಿ** ವಿವರಿಸಿರುವ ಅಂಶಗಳಂತೆ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

| ಕ್ರ.ಸಂ | ಸದಸ್ಯರು | ಪದನಾಮ |
|---|---|---|
| (1) | ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ಅಧ್ಯಕ್ಷರು | **ಅಧ್ಯಕ್ಷರು** |
| (2) | ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ಉಪಾಧ್ಯಕ್ಷರು (ಮಹಿಳೆಯರು). (ಉಪಾಧ್ಯಕ್ಷರು, ಮಹಿಳೆಯರಾಗಿಲ್ಲದಿದ್ದಲ್ಲಿ, ಅಧ್ಯಕ್ಷರು ಹಿರಿಯ ಮಹಿಳಾ ಸದಸ್ಯರನ್ನು ಉಪಾಧ್ಯಕ್ಷರನ್ನಾಗಿ ನೇಮಿಸುವುದು). | **ಉಪಾಧ್ಯಕ್ಷರು** |
| (3) | ನಗರಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ವ್ಯಾಪ್ತಿಯಲ್ಲಿ ಬರುವ ನಗರ ಪಾಲಿಕೆಯ/ ಪುರಸಭೆ/ ಪಟ್ಟಣ ಪಂಚಾಯತ್‌ನ ಎರಡು ಸದಸ್ಯರುಗಳು (ಇವರುಗಳಲ್ಲಿ ಕಡ್ಡಾಯವಾಗಿ ಕನಿಷ್ಟ ಒಬ್ಬರು ಮಹಿಳೆಯರಾಗಿರುವುದು). | **ಸದಸ್ಯರು** |
| (4) | ನಗರಪಾಲಿಕೆ /ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು (BEO). | **ಸದಸ್ಯರು** |
| (5) | ನಗರಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಗೆ ಸಂಬಂಧಿಸಿದ ತಾಲ್ಲೂಕು ವೈದ್ಯಾಧಿಕಾರಿಗಳು (THO). | **ಸದಸ್ಯರು** |
| (6) | ನಗರ/ ಪಟ್ಟಣವ್ಯಾಪ್ತಿಯ ಪೊಲೀಸ್ ಸಬ್ ಇನ್ಸಪೆಕ್ಟರ್ (ವೃತ್ತ ನಿರೀಕ್ಷಕರು ನಿಯೋಜಿಸುವುದು). | **ಸದಸ್ಯರು** |
| (7) | ನಗರಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಗೆ ಸಂಬಂಧಿಸಿದ ಶಿಶು ಅಭಿವೃಧಿ ಯೋಜನಾಧಿಕಾರಿಗಳು. | **ಸದಸ್ಯರು** |
| (8) | ಮಕ್ಕಳ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ನಗರ ವ್ಯಾಪ್ತಿಯ ಸ್ವಯಂ ಸೇವಾ ಸಂಸ್ಥೆಯ ಎರಡು (2) ಮಹಿಳಾ ಪ್ರತಿನಿಧಿಗಳು (ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಎರಡು (2) ಮಹಿಳಾ ಪ್ರತಿನಿಧಿಗಳನ್ನು ನಾಮ ನಿರ್ದೇಶನ ಮಾಡುವುದು). | **ಸದಸ್ಯರು** |
| (9) | ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯ ಪ್ರೌಢಶಾಲೆಯಲ್ಲಿ ಓದುತ್ತಿರುವ ಒಬ್ಬ ವಿದ್ಯಾರ್ಥಿ ಮತ್ತು ಒಬ್ಬ ವಿದ್ಯಾರ್ಥಿನಿ (BEO ರವರಿಂದ ನಾಮ ನಿರ್ದೇಶನ ಮಾಡುವುದು). | **ಸದಸ್ಯರು** |
| (10) | ನಗರಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ಗಳ ವ್ಯಾಪ್ತಿಗೆ ಸಂಬಂಧಿಸಿದ ಕಾರ್ಮಿಕ ಅಧಿಕಾರಿ. | **ಸದಸ್ಯರು** |

| | | |
|---|---|---|
| (11) | ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ಗಳ ವ್ಯಾಪ್ತಿಗೆ ಸಂಬಂಧಿಸಿದ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ. | **ಸದಸ್ಯರು** |
| (12) | ನಗರಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ಗಳ ವ್ಯಾಪ್ತಿಗೆ ಸಂಬಂಧಿಸಿದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ. | **ಸದಸ್ಯರು** |
| (13) | ನಗರಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ಗಳ ವ್ಯಾಪ್ತಿಗೆ ಸಂಬಂಧಿಸಿದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ. | **ಸದಸ್ಯರು** |
| (14) | ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ನ ವಾರ್ಡ್ ಮಟ್ಟದ ಅಧಿಕಾರಿಗಳು | **ಸದಸ್ಯರು** |
| (15) | ನಗರ ಪಾಲಿಕೆ/ಪುರಸಭೆ/ ಪಟ್ಟಣ ಪಂಚಾಯತ್‌ಗಳ ಮುಖ್ಯ ಅಧಿಕಾರಿಗಳು. | **ಸದಸ್ಯ ಕಾರ್ಯದರ್ಶಿ** |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

26/11/2021

**(ರಂಗನಾಥ)**
ಸರ್ಕಾರದ ಉಪ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ
ಸಬಲೀಕರಣ ಇಲಾಖೆ.

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು - ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವಂತೆ ಹಾಗೂ 200 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

**ಇವರಿಗೆ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.
8. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
9. ಅಧ್ಯಕ್ಷರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು.
10. ಎಲ್ಲಾ ಜಿಲ್ಲಾಧಿಕಾರಿಗಳು.
11. ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
12. ಎಲ್ಲಾ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.

13. ಎಲ್ಲಾ ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
14. ಎಲ್ಲಾಉಪನಿರ್ದೇಶಕರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು.
15. ಎಲ್ಲಾ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು.
16. ಎಲ್ಲಾ ಆಯುಕ್ತರು, ನಗರಸಭೆ /ಪುರಸಭೆ/ ಮಹಾನಗರ ಪಾಲಿಕೆ.
17. ಎಲ್ಲಾ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
18. ಎಲ್ಲಾ ತಹಶೀಲ್ದಾರರು.
19. ಎಲ್ಲಾ ಕಾರ್ಯ ನಿರ್ವಾಹಣಾಧಿಕಾರಿಗಳು, ತಾಲ್ಲೂಕು ಪಂಚಾಯತ್.
20. ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು.
21. ಎಲ್ಲಾ ತಾಲ್ಲೂಕು ವೈದ್ಯಾಧಿಕಾರಿಗಳು.
22. ಎಲ್ಲಾ ಸರ್ಕಲ್ ಪೊಲೀಸ್ ಇನ್ಸಪೆಕ್ಟರ್ಸ್,
23. ಎಲ್ಲಾ ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು.
24. ಎಲ್ಲಾ ಪುರಸಭೆ /ಪಟ್ಟಣ ಪಂಚಾಯತಿಯ ಮುಖ್ಯಾಧಿಕಾರಿಗಳು.
25. ಎಲ್ಲಾ ಉಪ ನೋಂದಣಾಧಿಕಾರಿಗಳು.
26. ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು.
27. ಎಲ್ಲಾ ಗ್ರಾಮಪಂಚಾಯತಿಯ ಅಧ್ಯಕ್ಷರು.
28. ಎಲ್ಲಾ ಪಂಚಾಯತ್ ಅಭಿವೃದ್ಧಿ ಅಧಿಕಾರಿ/ ಗ್ರಾಮ ಪಂಚಾಯತಿ ಕಾರ್ಯದರ್ಶಿ.
29. ಎಲ್ಲಾ ಕಂದಾಯ ನಿರೀಕ್ಷಕರು.
30. ಎಲ್ಲಾ ಗ್ರಾಮ ಪಂಚಾಯತಿ ಕೇಂದ್ರ ಸ್ಥಾನದ ಗ್ರಾಮ ಲೆಕ್ಕಿಗರು.
31. ಎಲ್ಲಾ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು/ ಶಿಕ್ಷಕರು.

**(ಕ್ರಮ ಸಂಖ್ಯೆ: 10 ರಿಂದ 31 ರವರೆಗೆ ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯರವರ ಮುಖಾಂತರ).**

**<u>ಪ್ರತಿ ಮಾಹಿತಿಗಾಗಿ:</u>**

1. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು
4. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿಗಳು.

*****

# ಅನುಬಂಧ

## ಅ) <u>ಕರ್ತವ್ಯಗಳು ಮತ್ತು ಜವಾಬ್ದಾರಿಗಳು</u>

1. ನಗರ ಪಾಲಿಕೆಯ/ ಪುರಸಭೆ/ ಪಟ್ಟಣ ಪಂಚಾಯತ್‌ನ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯಲ್ಲಿ 50% ಕ್ಕಿಂತ ಹೆಚ್ಚು ಮಹಿಳಾ ಸದಸ್ಯರಿರಬೇಕು.
2. ಕನಿಷ್ಟ ಪ್ರತಿ ಮೂರು (3) ತಿಂಗಳಿಗೊಮ್ಮೆ ಸಭೆಯನ್ನು ಏರ್ಪಡಿಸುವುದು.
3. ಸಮಿತಿ ಸಭೆಗಳಲ್ಲಿ ತೀರ್ಮಾನಿಸುವ ಎಲ್ಲಾ ಕಾರ್ಯಕ್ರಮಗಳು, ತೀರ್ಮಾನಗಳನ್ನು ಅನುಷ್ಠಾನಗೊಳಿಸುವ ಜವಾಬ್ದಾರಿ ಸದಸ್ಯ ಕಾರ್ಯದರ್ಶಿಯದ್ದಾಗಿರುತ್ತದೆ.
4. ಸಭೆಯ ನಡಾವಳಿಗಳನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಕಳುಹಿಸುವುದು.
5. ಸಭೆಯ ಕೋರಂ ಅಧ್ಯಕ್ಷರು ಸೇರಿದಂತೆ ಒಟ್ಟು ಸದಸ್ಯರಲ್ಲಿ ಶೇಕಡ 50 ಕ್ಕಿಂತ ಹೆಚ್ಚಿನ ಸದಸ್ಯರು ಸಭೆಯಲ್ಲಿ ಹಾಜರಿರತಕ್ಕದ್ದು.
6. ಕೋರಂ ಕೊರತೆಯಿಂದಾಗಿ ಸಭೆಯನ್ನು ನಡೆಸಲಾಗದಿದ್ದಲ್ಲಿ, ಸದರಿ ದಿನಾಂಕದಿಂದ 4 ದಿನಗಳ ಒಳಗೆ ಮತ್ತೊಂದು ದಿನಕ್ಕೆ ಸದಸ್ಯ ಕಾರ್ಯದರ್ಶಿಯು ಸಭೆಯನ್ನು ನಿಗದಿ ಪಡಿಸತಕ್ಕದ್ದು. ನಿಗದಿಪಡಿಸಲ್ಪಟ್ಟ ಸಭೆಯೂ ಸಹ ಅಗತ್ಯ ಕೋರಂ ಹೊಂದಿರದಿದ್ದಲ್ಲಿ, ಆಗವಾಸ್ತವವಾಗಿ ಹಾಜರಿರುವ ಸದಸ್ಯರ ಕೋರಂ ಸಾಕಾಗುತ್ತದೆ.
7. ಅಧ್ಯಕ್ಷರು ಗೈರು ಹಾಜರಿದ್ದಲ್ಲಿ ಸಭೆಯನ್ನು ಉಪಾಧ್ಯಕ್ಷರ ಅಧ್ಯಕ್ಷತೆಯಲ್ಲಿ ಸಭೆಯನ್ನು ಏರ್ಪಡಿಸುವುದು.
8. ಅಧ್ಯಕ್ಷರು ಮತ್ತು ಉಪಧ್ಯಕ್ಷರು ಇಬ್ಬರೂ ಗೈರು ಹಾಜರಿದ್ದಲ್ಲಿ ಹಾಜರಿದ್ದ ಹಿರಿಯ ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ನ ಸದಸ್ಯರ ಅಧ್ಯಕ್ಷತೆಯಲ್ಲಿ ಸಭೆ ನಡೆಸುವುದು.
9. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ಮಟ್ಟದಲ್ಲಿ 18 ವರ್ಷದೊಳಗಿನ ಹೆಣ್ಣು ಮಕ್ಕಳು ಮತ್ತು 21 ವರ್ಷದೊಳಗಿನ ಗಂಡುಮಕ್ಕಳ ಮಾಹಿತಿ ನಿರ್ವಹಿಸುವುದು.
10. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಶಾಲೆ, ಪೊಲೀಸ್, ಅಂಗನವಾಡಿ, ಮಹಿಳಾ ಸ್ವಸಹಾಯ ಸಂಘಗಳು, ಯುವ ಸಂಘಟನೆಗಳು ಮಕ್ಕಳ ಬಗ್ಗೆ ಪರಸ್ಪರ ವಿಚಾರ ವಿನಿಮಯ ಮಾಡಿಕೊಳ್ಳುವುದು.
11. ಅನೈತಿಕ ಸಾಗಾಣಿಕೆಗೆ ಒಳಗಾದ ಮಹಿಳೆಯರಿಗೆ ಮತ್ತು ಮಕ್ಕಳಿಗೆ ರಕ್ಷಣೆ ನೀಡುವುದು ಮತ್ತು ಅವರಿಗೆ ಹಾಗೂ ಅವರ ಕುಟುಂಬಗಳಿಗೆ ಆರ್ಥಿಕ, ನೈತಿಕ, ಸಾಮಾಜಿಕ, ವೈದ್ಯಕೀಯ ಹಾಗೂ ಶೈಕ್ಷಣಿಕ ಸಹಾಯವನ್ನು ಒದಗಿಸುವುದು.
12. ಸಮುದಾಯದ ಎಲ್ಲರ ಭಾಗವಹಿಸುವಿಕೆಯೊಂದಿಗೆ ಅನೈತಿಕ ಸಾಗಾಣಿಕೆಯನ್ನು ತಡೆಯುವಲ್ಲಿ ಉಸ್ತುವಾರಿ ಮಾಡುವುದು.
13. ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಯಲು ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ಮಟ್ಟದಲ್ಲಿ ಅರಿವು ಮೂಡಿಸಲು ಕಾರ್ಯಕ್ರಮ ಹಮ್ಮಿ ಕೊಳ್ಳುವುದು. ಅನೈತಿಕವಾಗಿ ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ತಡೆಯಲು, ಬಾಲ್ಯವಿವಾಹ, ಬಾಲಗರ್ಭಿಣಿ, ಬಾಲಭಿಕ್ಷಾಟನೆ, ಬಾಲಕಾರ್ಮಿಕತೆಗಳನ್ನು ತಡೆಯಲು ಸೂಕ್ತ ಪ್ರಚಾರ/ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಮತ್ತು ಮಾಹಿತಿ ಸಂಗ್ರಹಿಸಿ, ಉತ್ತಮವಾದ ಸಾಮಾಜಿಕ ವ್ಯವಸ್ಥೆಗಾಗಿ ಬೇಕಾದ ಸಂಪನ್ಮೂಲಗಳ ಕ್ರೋಢಿಕರಣಗೊಳಿಸುವುದು.
14. ಮಕ್ಕಳ ಅನೈತಿಕ ಸಾಗಾಣಿಕೆ, ಬಾಲ್ಯವಿವಾಹ, ಬಾಲಕಾರ್ಮಿಕತೆ ತಡೆಯಲು ಮತ್ತು ಮಕ್ಕಳ ಹಕ್ಕುಗಳ ಬಗ್ಗೆ ಶಾಲೆಗಳಲ್ಲಿ ಮಕ್ಕಳಿಗೆ ಅರಿವು ಮೂಡಿಸಬೇಕು.
15. ಹೊಸ ವ್ಯಕ್ತಿಗಳು ನಗರ ಪಾಲಿಕೆ / ಪುರಸಭೆ / ಪಟ್ಟಣ ಪಂಚಾಯತ್ ವ್ಯಾಪ್ತಿಗೆ ಆಗಮಿಸಿದ ಬಗ್ಗೆ ದಾಖಲೆ ಇಡಬೇಕು.
16. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಕಾಣೆಯಾದ ಮಹಿಳೆಯರ ಮತ್ತು ಮಕ್ಕಳ ದಾಖಲೆ ಇಡಬೇಕು.
17. ವಲಸೆ ಹೋದ ಕುಟುಂಬದ ಮಾಹಿತಿ ಇಡಬೇಕು ಮತ್ತು ಈ ಕುಟುಂಬದ ಬಗ್ಗೆ ಮೇಲ್ವಿಚಾರಣೆ ಮಾಡಬೇಕು.
18. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಯಾವುದೇ ಬಾಲ್ಯವಿವಾಹ ನಡೆಯುತ್ತಿರುವುದು ಕಂಡುಬಂದಲ್ಲಿ ಕೂಡಲೇ ಸಂಬಂಧಪಟ್ಟ ಬಾಲ್ಯವಿವಾಹ ನಿಷೇಧಾಧಿಕಾರಗಳ ಗಮನಕ್ಕೆ ತಂದು ಬಾಲ್ಯವಿವಾಹ ತಡೆಯಲು ಕ್ರಮವಹಿಸುವುದು ಮತ್ತು ಬಾಲ್ಯವಿವಾಹ ನಡೆದು ಹೋಗಿದಲ್ಲಿ ಎಫ್.ಐ.ಆರ್. ಒಳಗೊಂಡಂತೆ ಅಗತ್ಯ ಕ್ರಮ ಕೈಗೊಳ್ಳುವುದು.

19. ಬೇಸಿಗೆ ರಜೆ ಅವಧಿ ಮುಗಿದ ನಂತರ ಶಾಲೆಗೆ ದಾಖಲಾದ/ ದಾಖಲಾಗಬೇಕಾದ ಮಕ್ಕಳ ಸಮೀಕ್ಷೆ ನಡೆಸುವುದು.
20. ಶಿಕ್ಷಣ ಇಲಾಖೆಯೊಂದಿಗೆ ಕೈ ಜೋಡಿಸಿ, ಶಾಲೆಯಿಂದ ಹೊರಗುಳಿದ ಮಕ್ಕಳ ಪೋಷಕರ ಮನವೊಲಿಸಿ, ಶಾಲೆಗೆ ಮರಳಿ ದಾಖಲಾಗುವ ಬಗ್ಗೆ ಕ್ರಮವಹಿಸುವುದು.
21. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಮಕ್ಕಳ ವಿದ್ಯಾಭ್ಯಾಸದ ಮಹತ್ವ, ವಿವಿಧ ಇಲಾಖೆಗಳಿಂದ ಸಿಗುವ ಸೌಲಭ್ಯ ಮುಂತಾದವುಗಳನ್ನು ಸಾರ್ವಜನಿಕರ ಗಮನಕ್ಕೆ ತರುವುದು.
22. ಶಾಲೆಯಿಂದ ಹೊರಗುಳಿದ ಪ್ರಾಯ ಪೂರ್ವ ಮಕ್ಕಳಿಗೆ ವಿವಿಧ ರೀತಿಯ ಕೌಶಲ್ಯ ತರಬೇತಿಯನ್ನು ನೀಡಲು ಕ್ರಮವಹಿಸುವುದು.
23. ಉತ್ತಮ ಅಂಕಗಳನ್ನು ಪಡೆದ ಮಕ್ಕಳನ್ನು ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಪ್ರೋತ್ಸಾಹಿಸುವುದು.
24. ಹೆಣ್ಣು ಮಕ್ಕಳ ದಾಖಲಾತಿ ಹೆಚ್ಚಿರುವ ಶಾಲೆಗಳನ್ನು ಗುರುತಿಸಿ, ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಸನ್ಮಾನಿಸುವುದು.
25. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯ ಮೂಲಕ ಉತ್ತಮ ಶಿಕ್ಷಣ ತಜ್ಞರಿಂದ ವಿದ್ಯಾಭ್ಯಾಸದ ಮಹತ್ವದ ಕುರಿತು ಮಕ್ಕಳಿಗೆ ಮತ್ತು ಪೋಷಕರಿಗೆ ಅರಿವು ಮೂಡಿಸುವುದು.
26. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಸರಕಾರಿ ಸೌಲಭ್ಯಗಳನ್ನು ನೀಡುವಾಗ ಫಲಾನುಭವಿಗಳಿಂದ ಅವರ ಕುಟುಂಬಗಳಲ್ಲಿ ಬಾಲ್ಯವಿವಾಹ, ಬಾಲಕಾರ್ಮಿಕತೆ ಮತ್ತು ಬಾಲ ಭಿಕ್ಷಾಟನೆ ಅವಕಾಶ ನೀಡುವುದಿಲ್ಲವೆಂದು ಹಾಗೂ ಯಾವ ಮಕ್ಕಳೂ ಶಾಲೆಯಿಂದ ಹೊರಗುಳಿಯದಂತೆ ನೋಡಿಕೊಳ್ಳುವುದಾಗಿ ಕರಾರು ಪತ್ರ ಬರೆಯಿಸಿಕೊಳ್ಳುವುದು.
27. ಮಕ್ಕಳನ್ನು ದುಡಿಸುವ ಮಾಲೀಕರುಗಳ ಹಾಗೂ ಸಹಕರಿಸುವವರ ವಿರುದ್ಧ ಕ್ರಮ ಜರುಗಿಸುವಂತೆ ಸಂಬಂಧಪಟ್ಟ ಇಲಾಖೆಗೆ ಮಾಹಿತಿ ನೀಡುವುದು.
28. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ 18 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಗುಣಮಟ್ಟದ ಶಿಕ್ಷಣಕ್ಕಾಗಿ ಸಮುದಾಯದ, ಇಲಾಖೆಗಳ, ನಾಗರಿಕ ಸಂಘ ಸಂಸ್ಥೆಗಳ ಪಾಲುದಾರಿಕೆ, ಸಹಭಾಗಿತ್ವ, ಸಮನ್ವಯತೆ ಮತ್ತು ಹೊಣೆಗಾರಿಕೆ ಕುರಿತು ಕ್ರಮ ಕೈಗೊಳ್ಳುವುದು.
29. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ಮಟ್ಟದಲ್ಲಿ ಯಾವುದೇ ಅಂಗಡಿ ಕಾರರು, ಹೋಟೆಲ್ ಮಾಲೀಕರು, ವ್ಯಾಪಾರಸ್ಥರು, ಉದ್ದಿಮೆದಾರರು, ಕೈಗಾರಿಕೆಗಳ ಮಾಲೀಕರು, ರೈತರು, ಅಥವಾ ಯಾವುದೇ ವ್ಯಕ್ತಿಗಳು ಮಕ್ಕಳನ್ನು ಅಂಗಡಿ, ಹೋಟೆಲ್, ಉದ್ದಿಮೆ, ಕೈಗಾರಿಕೆ, ಹೊಲ, ಗದ್ದೆ, ಅಥವಾ ಇನ್ನೂ ಯಾವುದೇ ಸ್ಥಳದಲ್ಲಿ ದುಡಿಸಿಕೊಳ್ಳದಂತೆ ಅಥವಾ ಜೀತ ಸಂಬಂಳಕ್ಕೆ 18 ವರ್ಷದೊಳಗಿನ ಮಕ್ಕಳನ್ನು ದುಡಿಸದಂತೆ ಮತ್ತು ನಿರಂತರ ಶಿಕ್ಷಣ ಒದಗಿಸಲು ಕ್ರಮ ಕೈಗೊಳ್ಳುವುದು.
30. ವಿಕೃತ ಮೂಢನಂಬಿಕೆಗಳಿಗೆ ಹಾಗೂ ಅವಘಡಗಳಿಗೆ 18 ವರ್ಷದೊಳಗಿನ ಮಕ್ಕಳು ಮತ್ತು ಮಹಿಳೆಯರು ಬಲಿಯಾಗದಂತೆ ರಕ್ಷಣೆ ನೀಡುವುದು ಹಾಗೂ ಈ ಕುರಿತು ಕ್ರಮ ಕೈಗೊಳ್ಳುವುದು.
31. ಅನಾಥ/ ಪೋಷಕರಿಗೆ ಬೇಡವಾದ ಮಕ್ಕಳು ಕಂಡುಬಂದಲ್ಲಿ ಮಕ್ಕಳ ಕಲ್ಯಾಣ ಸಮಿತಿಗೆ ಮಾಹಿತಿ ನೀಡುವುದು ಅಲ್ಲದೆ, ಇಂತಹ ಪ್ರಕರಣಗಳನ್ನು ಮುಂಚಿತವಾಗಿ ಗುರುತಿಸಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕಕ್ಕೆ ತಿಳಿಸುವುದು. ಸಂಕಷ್ಟದಲ್ಲಿರುವ ಮಹಿಳೆ/ ಹೆಣ್ಣು ಮಕ್ಕಳು ಗರ್ಭಿಣಿಯಾದಾಗ ಇವರನ್ನು ನಿರಂತರವಾಗಿ ಅನುಸರಣೆ ಮಾಡುವುದು.
32. ಮಕ್ಕಳಿಗೆ ಸಂಬಂಧಿಸಿದ ಎಲ್ಲಾ ವಿಷಯಗಳನ್ನು ಕೈಗೆತ್ತಿಕೊಂಡು ಸಮಸ್ಯೆಗಳನ್ನು ಬಗೆಹರಿಸುವುದು.
33. ಲೈಂಗಿಕ ದೌರ್ಜನ್ಯಕ್ಕೊಳಗಾದ ಮಕ್ಕಳು ಕಂಡುಬಂದಲ್ಲಿ ಮಗುವಿಗೆ ರಕ್ಷಣೆ ನೀಡಿ ತಕ್ಷಣ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರು ಪಡಿಸುವುದು.
34. ಕಡ್ಡಾಯವಾಗಿ ಮಕ್ಕಳ ಸಭೆಗಳನ್ನು ಮಕ್ಕಳ ಗ್ರಾಮ ಸಭೆಗಳ ರೀತಿಯಲ್ಲಿ ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ಗಳಲ್ಲಿ ನಡೆಸುವಂತೆ ಕ್ರಮವಹಿಸಿ ಸದರಿ ಸಭೆಯಲ್ಲಿ ಚರ್ಚಿಸಿದ ಅಂಶಗಳಿಗೆ ಕ್ರಮವಹಿಸುವುದು.
35. ಮಕ್ಕಳಿಗೆ ಸಂಬಂಧಿಸಿದ ಯೋಜನೆಗಳಲ್ಲಿ ಅವಶ್ಯಕವಾದ ಸೌಲಭ್ಯ ಪರಿಹಾರ, ಪುನರ್ವಸತಿ ಮತ್ತು ಪರ್ಯಾಯ ವ್ಯವಸ್ಥೆಗಳನ್ನು ಆಯಾ ಇಲಾಖೆಗಳ ಅನುಸಾರವಾಗಿ ಮಕ್ಕಳಿಗೆ/ ಕುಟುಂಬಗಳಿಗೆ ಒದಗಿಸುವುದು.
36. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತಿಗಳ ವ್ಯಾಪ್ತಿಯಲ್ಲಿ ಪ್ರತಿಶಾಲೆಗಳಲ್ಲಿ ಮಕ್ಕಳ ಹಕ್ಕುಗಳ ಕ್ಲಬ್/ ಮೀನಾತಂಡ/ ಮಕ್ಕಳ ಸುರಕ್ಷಾ ಸಮಿತಿಗಳ ಕಾರ್ಯವೈಖರಿಯ ಬಗ್ಗೆ

ಮೇಲ್ವಿಚಾರಣೆ ಮಾಡುವುದು ಹಾಗೂ ಎಲ್ಲಾ ಮೂಲಭೂತ ಸೌಕರ್ಯಗಳು ಇರುವಂತೆ ನೋಡಿಕೊಳ್ಳುವುದು.

**ಆ. ಸದಸ್ಯ ಕಾರ್ಯದರ್ಶಿಗಳು ಮತ್ತು ಸದಸ್ಯರ ಕಾರ್ಯಗಳು ಮತ್ತು ಜವಾಬ್ದಾರಿಗಳನ್ನು ಈ ಕೆಳಗಿನಂತೆ ನಿಗದಿಗೊಳಿಸಲಾಗಿದೆ.**

1. ಸಮಿತಿಯ ಸಭೆಯನ್ನು ಸದಸ್ಯ ಕಾರ್ಯದರ್ಶಿಯು ಸಮಿತಿಯ ಅಧ್ಯಕ್ಷರೊಂದಿಗೆ ಸಮಾಲೋಚಿಸಿ, ನಿಗದಿಪಡಿಸಿದ ದಿನಾಂಕ ಮತ್ತು ಸಮಯದಲ್ಲಿ ನಡೆಸತಕ್ಕದ್ದು.
2. ಸದಸ್ಯ ಕಾರ್ಯದರ್ಶಿಯು ಪ್ರತಿಯೊಂದು ಸಭೆಯ ಬಗ್ಗೆ ಸದಸ್ಯರಿಗೆ ಕನಿಷ್ಠ ಮೂರು (3) ದಿನಗಳ ಮೊದಲು ಸಭಾ ಸೂಚನೆಯನ್ನು ಉದ್ದೇಶಿತ ಕಾರ್ಯಸೂಚಿಯೊಂದಿಗೆ ನೀಡತಕ್ಕದ್ದು.
3. ಸದಸ್ಯ ಕಾರ್ಯದರ್ಶಿಯು ಒಂದು ದಿನದ ಮೊದಲು ನೋಟೀಸನ್ನು ನೀಡುವ ಮೂಲಕ ತುರ್ತು ಸಭೆಯನ್ನು ಕರೆಯಬಹುದು.
4. ಮುಖ್ಯ ಅಧಿಕಾರಿಯಾಗಿ ತಮ್ಮ ಅಧಿಕಾರದ ವ್ಯಾಪ್ತಿಯಲ್ಲಿ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಗಾಗಿ ಎಲ್ಲ ಅಗತ್ಯ ಕ್ರಮವಹಿಸುವುದು ಮತ್ತು ಮಹಿಳೆಯರು ಮತ್ತು ಮಕ್ಕಳು ಸುರಕ್ಷಿತವಾಗಿರುವುದುನ್ನು ಖಾತ್ರಿಪಡಿಸಿಕೊಳ್ಳುವುದು.
5. ನಗರ ಮತ್ತು ಪಟ್ಟಣಗಳ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿ ನಿಯಮಿತವಾಗಿ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯ ಸಭೆ ನಡೆಯುವಂತೆ ಕ್ರಮವಹಿಸುವುದು.
6. ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಗೆ ಸಂಬಂಧಿಸಿದಂತೆ ಜನರಲ್ಲಿ ಅರಿವು ಮೂಡಿಸಲು ಸೂಕ್ತ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

**ಇ. ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯಲ್ಲಿನ ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ನ ಸದಸ್ಯರ ಜವಾಬ್ದಾರಿಗಳು**

1. 18 ವರ್ಷದೊಳಗಿನ ಎಲ್ಲ ಮಕ್ಕಳ ಮಾಹಿತಿ ನಗರ ಪಾಲಿಕೆ/ ಪುರಸಭೆ/ ಪಂಚಾಯತ್‌ನಲ್ಲಿ ನಿರ್ವಹಿಸುತ್ತಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
2. ಆರೋಗ್ಯ ಇಲಾಖೆಯ ಶುಶ್ರೂಷಕರು/ ದಾದಿಗಳು/ ಆಶಾಕಾರ್ಯಕರ್ತೆಯರೊಂದಿಗೆ ಪ್ರತಿಯೊಂದು ವಾರ್ಡಗಳಲ್ಲಿ ಆಗುವ ಪ್ರತಿಯೊಂದು ಜನನದ ಬಗ್ಗೆ ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಪರಿಶೀಲಿಸಿ ನೋಂದಣಿಯಾದ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
3. ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ಬಾಲ್ಯವಿವಾಹ ತಡೆಯಲು ಸಹಕರಿಸುವುದು. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಯಾವುದೇ ಬಾಲ್ಯವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
4. ಬಾಲ್ಯವಿವಾಹ ನಡೆಯುತ್ತಿರುವುದು ಕಂಡುಬಂದಲ್ಲಿ ತಕ್ಷಣ ಮೇಲಾಧಿಕಾರಿಗಳ ಗಮನಕ್ಕೆ ತರುವುದು ಮತ್ತು ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡುವುದು.

**ಈ. ತಾಲ್ಲೂಕು ವೈದ್ಯಾಧಿಕಾರಿಗಳು**

1. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್‌ನಲ್ಲಿ ಜನಿಸಿದ ಮಕ್ಕಳ ನೋಂದಣಿ ಆಗಿರುವ ಬಗ್ಗೆ ತಮ್ಮ ಅಧೀನ ಸಿಬ್ಬಂದಿಗಳ ಸಹಕಾರದಿಂದ ಖಾತ್ರಿ ಮಾಡಿಕೊಳ್ಳುವುದು.
2. ಮಹಿಳೆಯರಿಗೆ ಮತ್ತು ಹದಿಹರೆಯದ ಹೆಣ್ಣು ಮಕ್ಕಳಿಗೆ ಬಾಲ್ಯವಿವಾಹದಿಂದ ಆರೋಗ್ಯದ ಮೇಲಾಗುವ ದುಷ್ಪರಿಣಾಮಗಳನ್ನು, ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ತಮ್ಮ ಅಧೀನ ಸಿಬ್ಬಂದಿಗಳಿಗೆ ಅರಿವು ಮೂಡಿಸುವುದು.
3. ಬಾಲ್ಯವಿವಾಹಗಳು ನಡೆಯುವುದು ಕಂಡುಬಂದ ಸಂದರ್ಭದಲ್ಲಿ ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ಬಾಲ್ಯವಿವಾಹ ತಡೆಯಲು ಸಹಕರಿಸುವುದು.
4. ತನ್ನ ಕಾರ್ಯ ಕ್ಷೇತ್ರದಲ್ಲಿ ಯಾವುದೇ ಬಾಲ್ಯವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
5. ಬಾಲ್ಯವಿವಾಹ ನಡೆಯುತ್ತಿರುವುದು ಕಂಡುಬಂದಲ್ಲಿ ತಕ್ಷಣ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತರುವುದು ಮತ್ತು ಮಾಹಿತಿ ದಾರರ ಹೆಸರನ್ನು ಗೌಪ್ಯವಾಗಿಡುವುದು.
6. ಬಾಲಕಾರ್ಮಿಕ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣ ಸಮಿತಿಯ ಗಮನಕ್ಕೆತರುವುದು.

7. ತನ್ನ ಕಾರ್ಯಕ್ಷೇತ್ರದಲ್ಲಿ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣ ಪೊಲೀಸ್ ಹಾಗೂ ಸಮಿತಿಯ ಗಮನಕ್ಕೆ ತರುವುದು.
8. ವಿಕೃತ ಮೂಢನಂಬಿಕೆಗಳಿಗೆ ಹಾಗೂ ಅವಗಡಗಳಿಗೆ 18 ವರ್ಷದೊಳಗಿನ ಮಕ್ಕಳು ಮತ್ತು ಮಹಿಳೆಯರು ಬಲಿಯಾಗದಂತೆ ರಕ್ಷಣೆ ಮಾಡಲು ಸಮಿತಿಯ ಗಮನಕ್ಕೆ ತರುವುದು.

**ಉ. ಪೊಲೀಸ್ ಅಧಿಕಾರಿ:**

1. ಬಾಲ್ಯವಿವಾಹ ತಡೆಯುವುದಕ್ಕೆ ಬಾಲ್ಯವಿವಾಹ ನಿಷೇಧ ಅಧಿಕಾರಿಗಳಿಗೆ ಪೊಲೀಸ್ ಬೆಂಬಲ ಒದಗಿಸುವುದು.
2. ಸಮಿತಿಯ ಸಭೆಗೆ ಹಾಜರಾಗುವುದು ಮತ್ತು ಸಭಾನಿರ್ಣಯದಂತೆ ಕ್ರಮವಹಿಸುವುದು.
3. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಗಳೊಂದಿಗೆ ಜಂಟಿಯಾಗಿ ಪ್ರತಿ ತಿಂಗಳು ದಾಳಿಗಳನ್ನು ನಡೆಸಿ ಭಿಕ್ಷಾಟನೆಯಲ್ಲಿ ತೊಡಗಿರುವವರನ್ನು (ಮಹಿಳೆಯರು ಮತ್ತು ಮಕ್ಕಳನ್ನು ಸೇರಿದಂತೆ) ವಶಕ್ಕೆ ಪಡೆದು ಭಿಕ್ಷಾಟನೆ ನಿರ್ಮೂಲನೆಗೆ ನಿಯಮಾನುಸಾರ ಕ್ರಮವಹಿಸುವುದು.
4. ಮಕ್ಕಳ ದೌರ್ಜನ್ಯ ಪ್ರಕರಣಗಳು, ಬಾಲ್ಯವಿವಾಹ ಪ್ರಕರಣಗಳು, ಬಾಲಕಾರ್ಮಿಕ ಪ್ರಕರಣಗಳು ಕಂಡುಬಂದಲ್ಲಿ ಎಫ್.ಐ.ಆರ್. ದಾಖಲಿಸಿಕೊಂಡು ಕಾನೂನು ಕ್ರಮ ಜರುಗಿಸುವುದು ಮತ್ತು ಸಂತ್ರಸ್ತ ಮಕ್ಕಳ ರಕ್ಷಣೆಗೆ ಕ್ರಮವಹಿಸುವುದು ಮತ್ತು ಈ ಪ್ರಕರಣಗಳಲ್ಲಿ ಅಗತ್ಯ ಆರಕ್ಷಕ ಬೆಂಬಲವನ್ನು ತುರ್ತಾಗಿ ಸಂಬಂಧಿಸಿದ ಇಲಾಖೆ/ ಅಧಿಕಾರ/ ಸಿಬ್ಬಂದಿಗಳಿಗೆ ನೀಡುವುದು.

**ಊ. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು:**

1. ತಮ್ಮ ಅಧೀನ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಮೇಲ್ವಿಚಾರಕರು ಮಹಿಳೆಯರ ಮತ್ತು ಮಕ್ಕಳ ರಕ್ಷಣೆಗೆ ನಿಯಮಾನುಸಾರ ಕ್ರಮವಹಿಸುವುದನ್ನು ಖಾತ್ರಿ ಪಡಿಸಿಕೊಳ್ಳುವುದು.
2. ಬಾಲ್ಯವಿವಾಹಗಳು ನಡೆಯುವುದು ಕಂಡುಬಂದ ಸಂದರ್ಭದಲ್ಲಿ ಬಾಲ್ಯವಿವಾಹ ತಡೆಯಲು ಕ್ರಮವಹಿಸುವುದು.
3. ತನ್ನ ಕಾರ್ಯ ಕ್ಷೇತ್ರದಲ್ಲಿ ಯಾವುದೇ ಬಾಲ್ಯವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
4. ಬಾಲ್ಯವಿವಾಹದ ಬಗ್ಗೆ ಮಾಹಿತಿ ನೀಡಿದ ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡುವುದು.
5. ಸಮಾಜ ಕಲ್ಯಾಣ ಇಲಾಖೆ ಹಾಗೂ ಒಳಾಡಳಿತ ಇಲಾಖೆ (ಪೊಲೀಸ್ ಇಲಾಖೆ) ಗಳೊಂದಿಗೆ ಜಂಟಿಯಾಗಿ ಪ್ರತಿ ತಿಂಗಳು ದಾಳಿಗಳನ್ನು ನಡೆಸಿ ಭಿಕ್ಷಾಟನೆಯಲ್ಲಿ ತೊಡಗಿರುವವರನ್ನು (ಮಹಿಳೆಯರು ಮತ್ತು ಮಕ್ಕಳನ್ನು ಸೇರಿದಂತೆ) ವಶಕ್ಕೆ ಪಡೆದು ಭಿಕ್ಷಾಟನೆ ನಿರ್ಮೂಲನೆಗೆ ನಿಯಮಾನುಸಾರ ಕ್ರಮವಹಿಸುವುದು.
6. ಸಮಿತಿಯ ಸಭೆಗೆ ಹಾಜರಾಗಿ, ಸಭಾನಿರ್ಣಯದಂತೆ ಕ್ರಮವಹಿಸುವುದು.

**ಎ. ಸ್ವಯಂ ಸೇವಾ ಸಂಸ್ಥೆಯ ಪ್ರತಿ ನಿಧಿಗಳು**

1. ಸ್ವಯಂ ಸೇವಾ ಸಂಸ್ಥೆಗಳು ಮಕ್ಕಳ ರಕ್ಷಣೆಯ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳುವಂತೆ ಸ್ವಯಂ ಸೇವಾ ಸಂಸ್ಥೆಗಳನ್ನು ಮನವೊಲಿಸುವುದು.
2. ಮಹಿಳೆಯರ ಮತ್ತು ಮಕ್ಕಳ ರಕ್ಷಣೆಗೆ ಸಂಬಂಧಿಸಿದಂತೆ ಎಲ್ಲ ಸ್ವಯಂ ಸೇವಾ ಸಂಸ್ಥೆಗಳು, ಸ್ಥಳೀಯ ಸಂಸ್ಥೆ, ಇಲಾಖೆ, ಅಧಿಕಾರಿ/ ಸಿಬ್ಬಂದಿಯೊಂದಿಗೆ ಸಹಕರಿಸುವಂತೆ ಕ್ರಮವಹಿಸುವುದು.

**ಏ. ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿ**

1. ವಿದ್ಯಾರ್ಥಿ ವೃಂದದಲ್ಲಿ ಮಕ್ಕಳ ಸಹಾಯವಾಣಿ (1098)ರ ಬಗ್ಗೆ, ಮಕ್ಕಳ ಹಕ್ಕುಗಳ ಬಗ್ಗೆ, ಮಕ್ಕಳಿಗಾಗಿ ಇರುವ ಸೌಲಭ್ಯಗಳ ಬಗ್ಗೆ ಹಾಗೂ ಮಕ್ಕಳ ರಕ್ಷಣೆಗಾಗಿ ಇರುವ ಕಾನೂನುಗಳು ಮತ್ತು ಸರ್ಕಾರಿ ವ್ಯವಸ್ಥೆಯ ಬಗ್ಗೆ ಅರಿವು ಮೂಡಿಸಲು ಪ್ರಯತ್ನಿಸುವುದು.

**ಐ. ಕ್ಷೇತ್ರ ಶಿಕ್ಷಣಾಧಿಕಾರಿಗಳು (BEO)**

1. ಶಾಲೆಯಲ್ಲಿ ಮಕ್ಕಳ ನಿರಂತರ ಹಾಜರಾತಿಯನ್ನು ಖಾತ್ರಿಪಡಿಸಿಕೊಳ್ಳುವುದು.

8

2. ಮಕ್ಕಳ ಗೈರು ಹಾಜರಿ ಬಗ್ಗೆ ನಿಗಾವಹಿಸುವುದು. ಮಗು ಮೂರು (3) ದಿನಕ್ಕಿಂತ ಜಾಸ್ತಿದಿನಗಳ ಕಾಲ ಶಾಲೆಗೆ ಗೈರು ಹಾಜರಾದಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಸಹಕಾರದೊಂದಿಗೆ ಅಂತಹ ಮಕ್ಕಳ ಪೋಷಕರನ್ನು ಭೇಟಿಮಾಡಿ ಮಗುವನ್ನು ವಾಪಸ್ ಶಾಲೆಗೆ ಕರೆಯಿಸುವ ಬಗ್ಗೆ, ಶಿಕ್ಷಕರು ಕ್ರಮವಹಿಸುತ್ತಿರುವುದನ್ನು ಖಾತ್ರಿ ಪಡಿಸಿಕೊಳ್ಳುವುದು.
3. ಶಾಲೆ ಬಿಟ್ಟ ಮಕ್ಕಳ ಬಗ್ಗೆ ಅದರಲ್ಲೂ ಮುಖ್ಯವಾಗಿ ಋತುಮಾನದ ವಲಸೆಯಿಂದಾಗಿ ಶಾಲೆ ಬಿಡುವ ಮಕ್ಕಳ ಬಗ್ಗೆ ಅಂಗನವಾಡಿ ಕಾರ್ಯಕರ್ತೆಯರ ಸಹಕಾರದಿಂದ ಅನುಪಾಲನೆ ಮಾಡುವುದು.
4. ಸುತ್ತೋಲೆಯಲ್ಲಿರುವಂತೆ ಶಾಲೆಗಳಲ್ಲಿ ಮಕ್ಕಳ ಹಕ್ಕುಗಳ ಕ್ಲಬ್‌ಗಳು ರಚನೆಯಾಗಿ ಕಾರ್ಯನಿರ್ವಹಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳುವುದು ಮಕ್ಕಳಿಗೆ ಬಾಲ್ಯವಿವಾಹದಿಂದ ಉಂಟಾಗುವ ದುಷ್ಪರಿಣಾಮಗಳು ಮತ್ತು ಬಾಲ್ಯವಿವಾಹ ನಡೆಸಿದಲ್ಲಿ ದೊರೆಯುವ ಶಿಕ್ಷೆಯ ಬಗ್ಗೆ ಎಲ್ಲಾ ಶಾಲೆಗಳಲ್ಲಿ ಅರಿವು ಮೂಡಿಸುತ್ತಿರುವುದನ್ನು ಖಾತ್ರಿ ಪಡಿಸಿಕೊಳ್ಳುವುದು.
5. ಶಾಲೆಯಲ್ಲಿ ಪ್ರತಿ ತಿಂಗಳು ಮೌಲ್ಯಧಾರಿತ ಶಿಕ್ಷಣದ ತರಗತಿಗಳನ್ನು ನಡೆಸುವ ಮೂಲಕ ಸಾಮಾಜಿಕ ಜವಾಬ್ದಾರಿಗಳನ್ನು ಉತ್ತೇಜಿಸುತ್ತೀರುವುದನ್ನು ಮತ್ತು ಮಕ್ಕಳ ಹಕ್ಕುಗಳ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸುತ್ತಿರುವುದನ್ನು ಖಾತ್ರಿ ಪಡಿಸಿಕೊಳ್ಳುವುದು.
6. ಬಾಲ್ಯವಿವಾಹಗಳು ನಡೆಯುವುದು ಕಂಡು ಬಂದ ಸಂದರ್ಭದಲ್ಲಿ ಬಾಲ್ಯವಿವಾಹ ತಡೆಯಲು ಕ್ರಮವಹಿಸುವುದು.
7. ತನ್ನ ಕಾರ್ಯ ಕ್ಷೇತ್ರದಲ್ಲಿ ಯಾವುದೇ ಬಾಲ್ಯವಿವಾಹ ನಡೆಯದಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
8. ಬಾಲ್ಯವಿವಾಹದ ಬಗ್ಗೆ ಮಾಹಿತಿ ನೀಡಿದ ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡುವುದು.
9. ಪ್ರತಿ ಶಾಲೆಯಲ್ಲಿ 'ಮಕ್ಕಳ ಸಹಾಯವಾಣಿ (1098)' ಎಲ್ಲರಿಗೂ ಗೋಚರಿಸುವ ರೀತಿಯಲ್ಲಿ ಪ್ರಚುರಪಡಿಸಿರುವುದನ್ನು ಖಾತ್ರಿಪಡಿಸಿಕೊಳ್ಳುವುದು.
10. ಶಾಲೆಗಳ ಹತ್ತಿರದಲ್ಲಿ ತಂಬಾಕು ಮತ್ತು ಇತರ ಮಾದಕ ವಸ್ತುಗಳ ಮಾರಾಟವಾಗುತ್ತಿಲ್ಲದಿರುವುದನ್ನು ಖಾತ್ರಿ ಪಡಿಸಿಕೊಳ್ಳುವುದು.
11. ಪ್ರತಿ ತಿಂಗಳು ಮೇಲಿನ ವಿಷಯಗಳ ಬಗ್ಗೆ ಎಲ್ಲಾ ಶಾಲೆಗಳಿಂದ ವರದಿ ಪಡೆಯುವುದು ಹಾಗೂ ಸಭೆಗಳಿಗೆ ತಪ್ಪದೇ ಹಾಜರಾಗುವುದು.

**ಒ. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತ್ ಗಳ ವಾರ್ಡ್‌ಮಟ್ಟದ ಅಧಿಕಾರಿಗಳು**

1. ಅಂಗನವಾಡಿ ಕಾರ್ಯಕರ್ತೆಯರು/ ಆರೋಗ್ಯ ಕಾರ್ಯಕರ್ತೆಯರು / ಆಶಾಕಾರ್ಯಕರ್ತೆಯರುಗಳ ಸಹಕಾರದೊಂದಿಗೆ ತಮ್ಮ ಕಾರ್ಯವ್ಯಾಪ್ತಿಯ ವಾರ್ಡ್‌ನಲ್ಲಿ ಜನಿಸುವ ಮಕ್ಕಳ ನೋಂದಣಿ ಮತ್ತು ಜನನ ಪ್ರಮಾಣ ಪತ್ರ ವಿತರಣೆಯಾದ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು.
2. ಸಾಮೂಹಿಕ ವಿವಾಹ/ ವೈಯಕ್ತಿಕ ವಿವಾಹಗಳಲ್ಲಿ ಬಾಲ್ಯವಿವಾಹ ನಡೆಯುವ ಬಗ್ಗೆ ದೂರು ಬಂದಲ್ಲಿ ತಕ್ಷಣ ಬಾಲ್ಯವಿವಾಹ ನಿಷೇಧಕಾಯ್ದೆಯನ್ವಯ ಬಾಲ್ಯವಿವಾಹ ತಡೆಯುವ ಬಗ್ಗೆ ಕ್ರಮವಹಿಸುವುದು.
3. ಸಾಮೂಹಿಕ ವಿವಾಹಗಳು ನಡೆಯುವ ಸ್ಥಳದಲ್ಲಿ ಖುದ್ದು ಹಾಜರಿದ್ದು, ಯಾವುದೇ ಬಾಲ್ಯವಿವಾಹ ನಡೆಯದಂತೆ ಖಚಿತಪಡಿಸಿಕೊಳ್ಳುವುದು.
4. ಬಾಲ್ಯವಿವಾಹ ಶಿಕ್ಷಾರ್ಹ ಅಪರಾಧ ಎಂದು ಸಾರ್ವಜನಿಕರಿಗೆ ಮಾಹಿತಿ ನೀಡುವ ಫಲಕಗಳನ್ನು ಸಾಮೂಹಿಕ ವಿವಾಹ ನಡೆಯುವ ಸ್ಥಳಗಳಲ್ಲಿ ಪ್ರದರ್ಶಿಸಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು. ಫಲಕದಲ್ಲಿರುವ ಮಾಹಿತಿಯು ನಿಗದಿತ ಮಾರ್ಗಸೂಚಿಯಂತೆ ಇರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು.
5. ವಾರ್ಡ್‌ಗಳಲ್ಲಿ ನಡೆಯುವ ಮಹಿಳೆಯರ, ಮಕ್ಕಳ ರಕ್ಷಣೆಗೆ ಮತ್ತು ಬಾಲ್ಯವಿವಾಹಕ್ಕೆ ಸಂಬಂಧಿಸಿದ ಸಭೆಗಳಿಗೆ ತಪ್ಪದೇ ಹಾಜರಾಗುವುದು.

**ಓ. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತಗಳ ವ್ಯಾಪ್ತಿಗೆ ಸಂಬಂಧಿಸಿದ ಕಾರ್ಮಿಕ ಅಧಿಕಾರಿ.**

1. ನಗರ/ ಪಟ್ಟಣ ವ್ಯಾಪ್ತಿಯಲ್ಲಿ ಮಕ್ಕಳನ್ನು ದುಡಿಸಿಕೊಳ್ಳದಂತೆ ನಿರಂತರ ನಿಗಾವಹಿಸುವುದು. ನಗರ/ ಪಟ್ಟಣ ವ್ಯಾಪ್ತಿಯಲ್ಲಿ ಯಾವುದೇ ಅಂಗಡಿಕಾರರು, ಹೋಟೆಲ್ ಮಾಲೀಕರು, ವ್ಯಾಪಾರಸ್ಥರು, ಉದ್ದಿಮೆದಾರರು, ಕೈಗಾರಿಕೆಗಳ ಮಾಲೀಕರು, ರೈತರು, ಅಥವಾ ಯಾವುದೇ ವ್ಯಕ್ತಿಗಳು ಮಕ್ಕಳನ್ನು ಅಂಗಡಿ, ಹೋಟೆಲ್, ಉದ್ದಿಮೆ, ಕೈಗಾರಿಕೆ ಅಥವಾ ಇನ್ನೂ ಯಾವುದೇ

8

ಸ್ಥಳದಲ್ಲಿ ದುಡಿಸಿಕೊಳ್ಳದಂತೆ ಅಥವಾ ಸಂಬಂಳಕ್ಕೆ 18 ವರ್ಷದೊಳಗಿನ ಮಕ್ಕಳನ್ನು ದುಡಿಸದಂತೆ ಕ್ರಮ ಕೈಗೊಳ್ಳುವುದು.

2. ಬಾಲ್ಯಕಾರ್ಮಿಕತೆಯ ಬಗ್ಗೆ ಕಾರ್ಮಿಕ ಅಧಿಕಾರಿಯು ಸಾರ್ವಜನಿಕರಿಗೆ ಮಾಹಿತಿ ನೀಡುವ ಫಲಕಗಳನ್ನು ಸಾಮೂಹಿಕ ಸ್ಥಳಗಳಲ್ಲಿ ಪ್ರದರ್ಶಿಸಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಬೇಕು.

**ಔ. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತಗಳ ವ್ಯಾಪ್ತಿಗೆ ಸಂಬಂಧಿಸಿದ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ.**

1. ಸಮಾಜ ಕಲ್ಯಾಣ ಇಲಾಖೆಯ ಅಧೀನ ಇರುವ ವಿದ್ಯಾರ್ಥಿ ನಿಲಯಗಳಲ್ಲಿ ಮಕ್ಕಳ ಸಂಪೂರ್ಣ ಸುರಕ್ಷತೆಯನ್ನು ಖಾತ್ರಿ ಪಡಿಸಿಕೊಳ್ಳುವುದು.
2. ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಒಳಾಡಳಿತ ಇಲಾಖೆ (ಪೊಲೀಸ್ ಇಲಾಖೆ) ಗಳೊಂದಿಗೆ ಜಂಟಿಯಾಗಿ ಪ್ರತಿ ತಿಂಗಳುದಾಳಿಗಳನ್ನು ನಡೆಸಿ ಭಿಕ್ಷಾಟನೆಯಲ್ಲಿ ತೊಡಗಿರುವವರನ್ನು (ಮಹಿಳೆಯರು ಮತ್ತು ಮಕ್ಕಳನ್ನು ಸೇರಿದಂತೆ) ವಶಕ್ಕೆ ಪಡೆದು ಭಿಕ್ಷಾಟನೆ ನಿರ್ಮೂಲನೆಗೆ ನಿಯಮಾನುಸಾರ ಕ್ರಮವಹಿಸುವುದು.
3. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಪೈಕಿ ಸ್ಥಳೀಯವಾಗಿರುವ ಯಾವುದಾದರೂ ಸಮುದಾಯದಲ್ಲಿ ಸಾಂಪ್ರದಾಯಿಕವಾಗಿ ಬಾಲ್ಯವಿವಾಹಗಳು ನಡೆಯುವ ಪ್ರತೀತಿ ಇದ್ದಲ್ಲಿ ಆ ಸಮುದಾಯದಲ್ಲಿ ಬಾಲ್ಯವಿವಾಹದಿಂದಾಗಿ ಆಗುವ ದುಷ್ಪಾರಿಣಾಮಗಳ ಬಗ್ಗೆ ಹಾಗೂ ಬಾಲ್ಯವಿವಾಹಗಳು ಬಾಲ್ಯವಿವಾಹ ನಿಷೇಧಕಾಯ್ದೆಯಡಿ ಶಿಕ್ಷಾರ್ಹ ಅಪರಾಧ ಎನ್ನುವ ಬಗ್ಗೆ ಅರಿವು ಮೂಡಿಸುವ ಮೂಲಕ ಬಾಲ್ಯವಿವಾಹಗಳನ್ನು ತಡೆಗಟ್ಟಲು ಎಲ್ಲ ರೀತಿಯ ಕ್ರಮವಹಿಸುವುದು.

**ಕ. ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತಗಳ ವ್ಯಾಪ್ತಿಗೆ ಸಂಬಂಧಿಸಿದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳು.**

1. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಮಾಜ ಅಧೀನ ಇರುವ ವಿದ್ಯಾರ್ಥಿ ನಿಲಯಗಳಲ್ಲಿ ಮಕ್ಕಳ ಸಂಪೂರ್ಣ ಸುರಕ್ಷತೆಯನ್ನು ಖಾತ್ರಿ ಪಡಿಸಿಕೊಳ್ಳುವುದು.
2. ಹಿಂದುಳಿದ ವರ್ಗಗಳ ಪೈಕಿ ಯಾವುದಾದರು ಸಮುದಾಯದಲ್ಲಿ ಸಾಂಪ್ರದಾಯಿಕವಾಗಿ ಬಾಲ್ಯವಿವಾಹಗಳು ನಡೆಯುವ ಪ್ರತೀತಿ ಇದ್ದಲ್ಲಿ ಆ ಸಮುದಾಯದಲ್ಲಿ ಬಾಲ್ಯವಿವಾಹದಿಂದಾಗಿ ಆಗುವ ದುಷ್ಪಾರಿಣಾಮಗಳ ಬಗ್ಗೆ ಹಾಗೂ ಬಾಲ್ಯವಿವಾಹಗಳು ಬಾಲ್ಯವಿವಾಹ ನಿಷೇಧಕಾಯ್ದೆಯಡಿ ಶಿಕ್ಷಾರ್ಹ ಅಪರಾಧ ಎನ್ನುವ ಬಗ್ಗೆ ಅರಿವು ಮೂಡಿಸುವ ಮೂಲಕ ಬಾಲ್ಯವಿವಾಹಗಳನ್ನು ತಡೆಗಟ್ಟಲು ಎಲ್ಲ ರೀತಿಯ ಕ್ರಮವಹಿಸುವುದು.

**ಖ.ನಗರ ಪಾಲಿಕೆ/ ಪುರಸಭೆ/ ಪಟ್ಟಣ ಪಂಚಾಯತಗಳ ವ್ಯಾಪ್ತಿಗೆ ಸಂಬಂಧಿಸಿದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳು.**

1. ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಸಮಾಜ ಅಧೀನ ಇರುವ ವಿದ್ಯಾರ್ಥಿ ನಿಲಯಗಳಲ್ಲಿ ಮಕ್ಕಳ ಸಂಪೂರ್ಣ ಸುರಕ್ಷತೆಯನ್ನು ಖಾತ್ರಿ ಪಡಿಸಿಕೊಳ್ಳುವುದು.
2. ಅಲ್ಪಸಂಖ್ಯಾತ ಸಮುದಾಯಗಳ ಪೈಕಿ ಯಾವುದಾದರು ಸಮುದಾಯದಲ್ಲಿ ಸಾಂಪ್ರದಾಯಿಕವಾಗಿ ಬಾಲ್ಯವಿವಾಹಗಳು ನಡೆಯುವ ಪ್ರತೀತಿ ಇದ್ದಲ್ಲಿ ಆ ಸಮುದಾಯದಲ್ಲಿ ಬಾಲ್ಯವಿವಾಹದಿಂದಾಗಿ ಆಗುವ ದುಷ್ಪಾರಿಣಾಮಗಳ ಬಗ್ಗೆ ಹಾಗೂ ಬಾಲ್ಯವಿವಾಹಗಳು ಬಾಲ್ಯವಿವಾಹ ನಿಷೇಧಕಾಯ್ದೆಯಡಿ ಶಿಕ್ಷಾರ್ಹ ಅಪರಾಧ ಎನ್ನುವ ಬಗ್ಗೆ ಅರಿವು ಮೂಡಿಸುವ ಮೂಲಕ ಬಾಲ್ಯವಿವಾಹಗಳನ್ನು ತಡೆಗಟ್ಟಲು ಎಲ್ಲಾ ರೀತಿಯ ಕ್ರಮವಹಿಸುವುದು.

26/11/2025

**(ರಂಗನಾಥ)**
ಸರ್ಕಾರದ ಉಪ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರೀಕರ
ಸಬಲೀಕರಣ ಇಲಾಖೆ.